ಮೈಮೇಲೆ ಹರಿದ ಬಟ್ಟೆ ಇದ್ದರೂ ಚಿಂತೆಯಿಲ್ಲ. ಕೈಯಲ್ಲೊಂದು ಕನ್ನಡ ಪತ್ರಿಕೆ ಇರಲಿ.
ಡಿ..ವಿ.ಜಿ.

## ನಿತ್ಯ ಪಂಚಾಂಗ

ಮಾಸ: ಶ್ರಾವಣ | ಸಂವತ್ಸರ: ಕ್ರೋಧಿ

**28–08–2024 – ಬುಧವಾರ**

| | |
|---|---|
| ತಿಥಿ | : ದಶಮಿ |
| ಪಕ್ಷ | : ಕೃಷ್ಣ |
| ನಕ್ಷತ್ರ | : ಮೃಗಶಿರ |
| ಯೋಗ | : ವಜ್ರ |
| ಕರಣ | : ವಾಣಿಜ |
| ಸೂರ್ಯೋದಯ | : 06:09:01 |
| ಸೂರ್ಯಾಸ್ತ | : 18:46:42 |
| ರಾಹು ಕಾಲ | : 12:28–14:03 |
| ಯಮಘಂಡ ಕಾಲ | : 07:44–09:18 |
| ಗುಳಿಕ ಕಾಲ | : 10:53–12:28 |

## ತುಂಗಭದ್ರಾ ನೀರಿನ ಮಟ್ಟ



ಮಂಗಳವಾರ : 27–08–2024

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1628.29 ಅಡಿ |
| ಒಳ ಹರಿವು | 20956 ಕ್ಯುಸೆಕ್ |
| ಹೊರ ಹರಿವು | 10169 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 87.779 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |
| ಕಳೆದ ವರ್ಷ ಇದೇ ದಿನ | |
| ಇಂದಿನ ಮಟ್ಟ | 1625.97 ಅಡಿ |
| ಒಳ ಹರಿವು | 409 ಕ್ಯುಸೆಕ್ |
| ಹೊರ ಹರಿವು | 7030 ಕ್ಯುಸೆಕ್ |
| ಸಾಮರ್ಥ್ಯ | 79.698 ಟಿಎಂಸಿ |

# ಜನಗಳ ಸುಸ್ಥಿರ ಆರೋಗ್ಯ ಸುಧಾರಣೆಗೆ ಆದ್ಯತೆ ನೀಡೋಣ

### ಜಿಪಂ ಸಿಇಒ ರಾಹುಲ್ ಶರಣಪ್ಪ ಸಂಕನೂರ ಹೇಳಿಕೆ | ಗ್ರಾಮ ಆರೋಗ್ಯ ತರಬೇತಿ ಕಾರ್ಯಕ್ರಮ



**■ ಹಂಪಿ ಟೈಮ್ಸ್ ಬಳ್ಳಾರಿ**

ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್‌ಗಳ ಮೂಲಕ ಪ್ರತಿ ಗ್ರಾಮಗಳಲ್ಲಿ ಆರೋಗ್ಯ ತಪಾಸಣಾ ಶಿಬಿರಗಳನ್ನು ಕ್ರಮಬದ್ಧವಾಗಿ ಆಯೋಜಿಸುವ ಮೂಲಕ ಜನಸಾಮಾನ್ಯರ ಸುಸ್ಥಿರ ಆರೋಗ್ಯ ಸುಧಾರಣೆಗೆ ಆದ್ಯತೆ ನೀಡೋಣ ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ತಿಳಿಸಿದರು.

ಜಿಲ್ಲಾಡಳಿತ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆಯಡಿ ಮೈಸೂರಿನ ಅಬ್ದುಲ್ ನಜೀರಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ ಸಂಯೋಗದೊಂದಿಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಗ್ರಾಮ ಆರೋಗ್ಯ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅಸಾಂಕ್ರಾಮಿಕ ರೋಗಗಳಾದ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಕ್ಷಯರೋಗ, ಮಾನಸಿಕ ಆರೋಗ್ಯ, ಅಪೌಷ್ಟಿಕತೆ, ರಕ್ತಹೀನತೆ ಹಾಗೂ ಮುಟ್ಟಿನ ನೈರ್ಮಲ್ಯ ಮತ್ತು ಬಾಲ್ಯವಿವಾಹ ತಡೆಗಟ್ಟುವಿಕೆ ಮುಂತಾದ ಮಹತ್ವಪೂರ್ಣ ಅಂಶಗಳನ್ನು ಒಳಗೊಂಡಿದ್ದು, ರಾಜ್ಯ ಸರಕಾರದ ಆಶಯದಂತೆ ಸೂಕ್ತ ಆರೈಕೆ, ಚಿಕಿತ್ಸೆ ಅಗತ್ಯವಿರುವವರಿಗೆ ಮೇಲ್ಮಟ್ಟದ ಆಸ್ಪತ್ರೆಗೆ ಕಳುಹಿಸುವ ಮೂಲಕ ಆರೋಗ್ಯಯುತ ಸಮಾಜ ನಿರ್ಮಿಸಲು ಪ್ರತಿಯೊಬ್ಬರೂ ಕೈಜೋಡಿಸೋಣ ಎಂದು ಹೇಳಿದರು.

ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಂಟಿಯಾಗಿ ಸಂಬಂಧಿಸಿದ ಗ್ರಾಮ ಪಂಚಾಯತ ಅಡಿಯಲ್ಲಿ ಪ್ರತಿ ಗ್ರಾಮದಲ್ಲಿ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲು ಗ್ರಾಮ ಆರೋಗ್ಯ ಪಡೆಗಳ ಸದಸ್ಯರಾದ ಪಂಚಾಯತ್ ಸದಸ್ಯರು, ಪಂಚಾಯತ್ ವ್ಯಾಪ್ತಿಯಲ್ಲಿ ಇರುವ ಇತರ ಇಲಾಖೆಯ ಸಿಬ್ಬಂದಿಯವರಿಗೆ ಸೂಕ್ತ ತರಬೇತಿಯನ್ನು ನೀಡಬೇಕು ಎಂದು ಸೂಚಿಸಿದರು.



ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ನಾಗರಾಜ, ಮಂಜುನಾಥ್, ತರಬೇತಿ ನೀಡಿದರು.

ಜಿಪಂನ ಉಪ ಕಾರ್ಯದರ್ಶಿ ಗಿರಿಜಾ ಶಂಕರ, ಜಿಪಂನ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾ ಚಾರ್ಯ, ಯೋಜನಾ ನಿರ್ದೇಶಕ ವಿನೋದ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ವೈ.ರಮೇಶ್ ಬಾಬು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ವಿಜಯ್ ಕುಮಾರ್ ಕೆ.ಹೆಚ್, ಮಲೇರಿಯಾ ನಿಯಂತ್ರಣ ಅಧಿಕಾರಿ ಡಾ.ಅಬ್ದುಲ್ಲಾ, ಜಿಲ್ಲಾ ಕ್ಷಯರೋಗ ನಿರ್ಮೂಲ ನಾಧಿಕಾರಿ, ಡಾ.ಇಂದ್ರಾಣಿ.ವಿ, ಜಿಲ್ಲಾ ಸರ್ವೇ ಕ್ಷಣಾಧಿಕಾರಿ, ಡಾ. ಮರಿಯಂಬಿ.ವಿ.ಕೆ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಮನೋರೋಗ ತಜ್ಞ ಡಾ.ರೋಹನ್ ವನಗುಂದಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪ ನವರ ಸೇರಿದಂತೆ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು,ತಾಲ್ಲೂಕುಆರೋಗ್ಯಾಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಹಾಗೂ ಸಿಬ್ಬಂದಿಯವರು ಭಾಗವಹಿಸಿದ್ದರು.

# ಗಣೇಶ–ಈದ್ ಮಿಲಾದ್ ಶಾಂತಿಯುತ ಆಚರಿಸಿ

### ಡಿವೈಎಸ್ಪಿ ಮಲ್ಲೇಶ್ ಮಲ್ಲಾಪುರ ಸೂಚನೆ



**■ ಹಂಪಿ ಟೈಮ್ಸ್ ಕೊಟ್ಟೂರು**

ಗಣೇಶ ಚತುರ್ಥಿಯನ್ನು ಪ್ರತಿ ವರ್ಷದ ಆಚರಣೆಯಂತೆ ಸಂಪ್ರದಾಯದಂತೆ ಈ ವರ್ಷ ಕೂಡಾ ಸಂಭ್ರಮದಿಂದ ಆಚರಿಸಿ.ಜತೆಗೆ ಗಣೇಶನ ಮೂರ್ತಿ ಪ್ರತಿಷ್ಠಾಪಿಸುವ ಪ್ರತಿಯೊಬ್ಬರು ಎಲ್ಲಾ ಇಲಾಖೆಯಿಂದ ಅನುಮತಿಯನ್ನು ಪಡೆದುಕೊಳ್ಳುವುದು ಕಡ್ಡಾಯ ಎಂದು ಡಿವೈಎಸ್ಪಿ ಮಲ್ಲೇಶ್ ಮಲ್ಲಾಪುರ ಸೂಚಿಸಿದರು.

ಸೆಪ್ಟಂಬರ್ 7ಕ್ಕೆ ಗಣೇಶೋತ್ಸವ ಮತ್ತು ಸೆ.16 ಕ್ಕೆ ಈದ್ ಮಿಲಾದ್ ಪ್ರಯುಕ್ತ ಪೊಲೀಸ್ ಠಾಣೆಯ ಆವರಣದಲ್ಲಿ ಡಿವೈಎಸ್ಪಿ ಮಲ್ಲೇಶ್ ಮಲ್ಲಾಪುರ್ ನೇತೃತ್ವದಲ್ಲಿ ಕರೆಯಲಾದ ಶಾಂತಿ ಸಭೆಯಲ್ಲಿ ಸೂಚಿಸಿದರು. ದಾರಿ ಮಧ್ಯದಲ್ಲಿ ಗಣೇಶನ ಮೂರ್ತಿಯನ್ನು ಪ್ರತಿಷ್ಠಾಪಿಸಿ ಜನರಿಗೆ ಓಡಾಡಲು ತೊಂದರೆಪಡಿಸದಂತೆ ಆದೇಶಿಸಿದರು. ಸಿಪಿಐ ವೆಂಕಟೇಶ್ ಸ್ವಾಮಿ ಮಾತನಾಡಿ ಹಿಂದು ,ಮುಸ್ಲಿಮ್ ಬಾಂದವರು ಸಹೋದರರಂತೆ ಹಬ್ಬವನ್ನು ಸಂಭ್ರಮದಿಂದ ಆಚರಿಸಿ, ಯಾವುದೇ ರೀತಿಯಾಗಿ ಅಹಿತಕರ ಘಟನೆಗಳು ಸಂಭವಿಸದಂತೆ ಮುಖಂಡರು ಜಾಗೃತಿ ವಹಿಸಿ ಎಂದರು.

ಪಿಎಸ್ಐ ಗೀತಾಂಜಲಿ ಶಿಂಧೆ ಮಾತನಾಡಿ ಗಣೇಶ ಪ್ರತಿಷ್ಠಾಪನೆ ಪೂರ್ವ ಅನುಮತಿಯನ್ನು ಪಡೆಯಬೇಕು. ಅನುಮತಿ ಪಡೆಯದೇ ಪ್ರತಿಷ್ಠಾಪನೆ ಮಾಡಿದರೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕೆಇಬಿ ಅಧಿಕಾರಿ ಚೇತನ್ ಕುಮಾರ್,ಪಟ್ಟಣ ಪಂಚಾಯಿತಿ ಅಧಿಕಾರಿಗಳು, ತಾಲೂಕು ಆಡಳಿತ ಅಧಿಕಾರಿಗಳು, ಅಗ್ನಿಶಾಮಕ ದಳ ಅಧಿಕಾರಿಗಳು, ಪೊಲೀಸ್ ಇಲಾಖೆ ಸಿಬ್ಬಂದಿ, ಸಾರ್ವಜನಿಕರು ಮತ್ತು ಮುಸ್ಲಿಂ ಪ್ರಮುಖ ಮುಖಂಡರು ಹಾಜರಿದ್ದರು.

14 ಭಾಷೆಗಳಲ್ಲಿ
ಹಂಪಿ ಟೈಮ್ಸ್ ವೆಬ್‌ನ್ಯೂಸ್‌ಗೆ
ಭೇಟಿ ನೀಡಿ, ನಿಮ್ಮ ಮಾತೃಭಾಷೆಯಲ್ಲಿ ಸುದ್ದಿ, ಲೇಖನ ಓದಿರಿ...
www.hampitimes.com

# ಏಕ ಬಳಕೆ ಪ್ಲಾಸ್ಟಿಕ್ ತ್ಯಜಿಸಿ, ಪರಿಸರ ಉಳಿಸಿ

### ಪುರಸಭೆ ಮುಖ್ಯಾಧಿಕಾರಿ ದುರುಗಣ್ಣ ಹೇಳಿಕೆ | ಕಂಪ್ಲಿಯಲ್ಲಿ ಜಾಗೃತಿ ಬೀದಿ ನಾಟಕ ಪ್ರದರ್ಶನಕ್ಕೆ ಚಾಲನೆ

**■ ಹಂಪಿ ಟೈಮ್ಸ್ ಕಂಪ್ಲಿ**



ಪರಿಸರಕ್ಕೆ ಹೆಚ್ಚಿನ ಹಾನಿಯಾಗುವುದರ ಜತೆಗೆ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವಂಥ ಏಕ ಬಳಕೆ ಪ್ಲಾಸ್ಟಿಕ್ ತ್ಯಜಿಸುವ ಮೂಲಕ ಪರಿಸರ ಉಳಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಕೆ.ದುರುಗಣ್ಣ ತಿಳಿಸಿದರು.

ಪಟ್ಟಣದ ಹಳೇ ಬಸ್ ನಿಲ್ದಾಣದಲ್ಲಿ ಸ್ವಚ್ಛ ಭಾರತ ಮಿಷನ್ 2.0 (ನಗರ) ಯೋಜನೆಯಡಿ ಏಕ ಬಳಕೆ ಪ್ಲಾಸ್ಟಿಕ್ ನಿಷೇಧ ಕುರಿತು ಕರುನಾಡು ಸಂಸ್ಥೆಯಿಂದ ಆಯೋಜಿಸಿದ್ದ ಬೀದಿ ನಾಟಕ ಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡಿದರು. ಸ್ವಚ್ಛ ಮತ್ತು ಸುಂದರ ಕಂಪ್ಲಿ ಪಟ್ಟಣ ಮಾಡಲು ಹೆಚ್ಚಿನ ಒತ್ತು ನೀಡಿದ್ದು, ವ್ಯಾಪಾರಸ್ಥರು ಸೇರಿ ಎಲ್ಲರೂ ಸ್ವಚ್ಛತೆ ಕಾಪಾಡುವುದರ ಜತೆಗೆ ನಿಷೇಧಿತ ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ತ್ಯಜಿಸುವ ಮೂಲಕ ಸಹಕರಿಸಬೇಕು ಎಂದು ತಿಳಿಸಿದರು.

ಕರುನಾಡು ಸಂಸ್ಥೆ ಕಾರ್ಯದರ್ಶಿ ಹುಡೇಂ ಕೃಷ್ಣಮೂರ್ತಿ ಮಾತನಾಡಿ, ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ಸರಕಾರಗಳು ನಾನಾ ಕಾರ್ಯಕ್ರಮಗಳನ್ನು ಆಯೋಜಿಸಿದ್ದು, ಕಂಪ್ಲಿ ಪುರಸಭೆಯಿಂದ ಏಕ ಬಳಕೆ ಪ್ಲಾಸ್ಟಿಕ್ ನಿಷೇಧದ ಕುರಿತ ಜಾಗೃತಿಗಾಗಿ ಬೀದಿ ನಾಟಕ ಪ್ರದರ್ಶನ ಆಯೋಜಿಸಿರುವುದು ಸಾರ್ವಜನಿಕರ ಮಾಹಿತಿಗೆ ಉಪಯುಕ್ತ ಕಾರ್ಯಕ್ರಮವಾಗಿದೆ. ಕರುನಾಡು ಸಂಸ್ಥೆಯ ಕಲಾವಿದರು ಉತ್ತಮವಾಗಿ ಬೀದಿ ನಾಟಕ ಪ್ರದರ್ಶನ ಮಾಡಲಿದ್ದು, ಈ ಮೂಲಕ ಸ್ವಚ್ಛ ಕಂಪ್ಲಿ ಪಟ್ಟಣ ಮಾಡಲು ಎಲ್ಲರೂ ಮುಂದಾಗಬೇಕಿದೆ ಎಂದು ತಿಳಿಸಿದರು.

ಪುರಸಭೆ ಕಿರಿಯ ಆರೋಗ್ಯ ನಿರೀಕ್ಷಕರಾದ ಜೀವನ್ ಸ್ವಾತಿ ಮಾತನಾಡಿ, ಸ್ವಚ್ಛತೆಯೇ ಆರೋಗ್ಯ ಎಂಬುದನ್ನು ಎಲ್ಲರೂ ಅರಿಯಬೇಕಿದೆ. ಅಲ್ಲದೆ, ಏಕ ಬಳಕೆ ಪ್ಲಾಸ್ಟಿಕ್ ನಿಷೇಧಿಸಿದ್ದು, ಅದನ್ನು ಬಳಸುವ ಮೂಲಕ ಪರಿಸರಕ್ಕೆ ಯಾರೂ ಹಾನಿ ಮಾಡಬಾರದು. ಸ್ವಚ್ಛ ಹಾಗೂ ಸುಂದರ ಕಂಪ್ಲಿ ಪಟ್ಟಣ ಮಾಡುವ ನಿಟ್ಟಿನಲ್ಲಿ ಪುರಸಭೆ ಅಧಿಕಾರಿಗಳು, ಸಿಬ್ಬಂದಿ ಶ್ರಮಿಸುತ್ತಿದ್ದು ಎಲ್ಲರೂ ಕೈಜೋಡಿಸಬೇಕೆಂದು ತಿಳಿಸಿದರು. ಈ ಸಂದರ್ಭದಲ್ಲಿ ಪುರಸಭೆ ಹಿರಿಯ ಆರೋಗ್ಯ ನಿರೀಕ್ಷಕರಾದ ಪ್ರಕಾಶ್ ಬಾಬು, ಎಎಸ್ ಐ ಬಸವರಾಜ ಸೇರಿ ಇತರರು ಇದ್ದರು. ಕರುನಾಡು ಶಿಕ್ಷಣ, ಗ್ರಾಮೀಣ ಮತ್ತು ನಗರಾಭಿವೃದ್ಧಿ ಸಂಸ್ಥೆಯ ಕಲಾ ತಂಡದ ಕಲಾವಿದರಾದ ಚೌಳೂರು ನಾಗರಾಜ್, ರೇಖಲಗೆರೆ ಮಲ್ಲೇಶ್, ಚಿನ್ನೋಬನಹಳ್ಳಿ ಗುರುಮೂರ್ತಿ, ತಿಮ್ಮಣ್ಣನಹಳ್ಳಿ ದೇವೀರಮ್ಮ, ದಾವಣಗೆರೆ ಪ್ರೇಮಾ, ಮಲ್ಲೂರಹಳ್ಳಿ ಹಂಪಣ್ಣ, ದುರುಗೇಶ್, ಹೊಸದುರ್ಗ ಕಲ್ಕೆರೆ ರಾಜಪ್ಪಅವರು ಬೀದಿನಾಟಕ ಪ್ರದರ್ಶಿಸಿದರು. ಇದಕ್ಕೂ ಮುನ್ನ ಪಟ್ಟಣದ ಮುಖ್ಯರಸ್ತೆ ಸೇರಿ ನಾನಾ ಕಡೆ ಮಹಿಳಾ ಸಂಘದ ಸದಸ್ಯರು, ಕಲಾವಿದರು ಹಾಗೂ ಪುರಸಭೆ ಅಧಿಕಾರಿಗಳು, ಸಿಬ್ಬಂದಿಯಿಂದ ಏಕ ಬಳಕೆ ಪ್ಲಾಸ್ಟಿಕ್ ನಿಷೇಧ ಕುರಿತ ಜಾಗೃತಿಗಾಗಿ ಜಾಥಾ ನಡೆಯಿತು.

# ವಸತಿ ಶಾಲೆಯಲ್ಲಿ ಅರಿವು

ಮೂರನೆ ಪುಟದಿಂದ

"ಸೊಳ್ಳೆ ನಿಯಂತ್ರಣ ಪ್ರತಿಯೊಬ್ಬರ ಜವಾಬ್ದಾರಿ" ತಮ್ಮ ಮನೆಯ ಸುತ್ತ–ಮುತ್ತ ತ್ಯಾಜ್ಯ ವಸ್ತುಗಳಾದ ಟೈರ್, ಒರಳುಕಲ್ಲು, ತೆಗ್ಗಿನ ಚಿಪ್ಪು, ಹೊಡೆದ ಪ್ಲಾಸ್ಟಿಕ್ ಬಕೆಟ್ ಇತ್ಯಾದಿಗಳನ್ನು ಬಿಸಾಡಬಾರದು. ಸ್ವಚ್ಛತೆ ಕಾಪಾಡಬೇಕು. ಅನಾಫಿಲಿಸ್ ಸೋಂಕಿತ ಹೆಣ್ಣು ಮಲೇರಿಯಾ ಖಾಯಿಲೆ, ಕ್ಯೂಲೇಸ್ ಜಾತಿಯ ಸೊಳ್ಳೆಯಿಂದ ಆನೆಕಾಲು ರೋಗ ಮತ್ತು ಮೆದುಳು ಜ್ವರವನ್ನು ತಡೆಗಟ್ಟಬಹುದು ಎಂದರು.

ವಸತಿ ಶಾಲೆಯ ಪ್ರಾಂಶುಪಾಲ ಮಂಜುನಾಥ ಬೇಲೂರು ಅವರು ಮಾತನಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಾಕಾಂಕ್ರಮಿಕ ರೋಗಗಳ ನಿಯಂತ್ರಕ್ಕಾಗಿ ಹಮ್ಮಿಕೊಳ್ಳುವ ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಿಗೆ ಬಹಳ ಉಪಯುಕ್ತವಾಗಿವೆ. ವಿದ್ಯಾರ್ಥಿಗಳು ಇಂತಹ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಂಡು ತಮ್ಮ ತಮ್ಮ ಗ್ರಾಮಗಳಲ್ಲಿ, ವಾರ್ಡ್‌ಗಳಲ್ಲಿ ಹಾಗೂ ಸುತ್ತ–ಮುತ್ತಲಿನ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ಕರೆ ನೀಡಿದರು.

ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಎನ್.ವಿ.ಬಿ.ಡಿ.ಸಿ.ಪಿ ಸಿಬ್ಬಂದಿಯಾದ ಶ್ರೀನಿವಾಸ ಸೇರಿದಂತೆ ಹಾಸ್ಟೆಲ್ ನಿಲಯ ಪಾಲಕರು, ಇತರೆ ಶಿಕ್ಷಕರು, ಆಶಾ ಕಾರ್ಯ ಕರ್ತೆಯರು, ಸಿಬ್ಬಂದಿಗಳು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪ್ರಗತಿ ಪತ್ತಿನ ಸೌಹಾರ್ದ ಸಹಕಾರಿ ಸಂಘ ನಿ.,ಹೊಸಪೇಟೆ.
ನೊಂ.ಸಂ.ಸ.ನಿ.23/ಸೌಕಾ/1337/ನೊಂದಣಿ/06–07 ದಿನಾಂಕ :17/04/2006
ಮೊ: 7019726629, ಶ್ರೀಕಾಳಿಕಾದೇವಿ ದೇವಸ್ಥಾನದ ಪಕ್ಕದಲ್ಲಿ
ಬಳ್ಳಾರಿ ರಸ್ತೆ. ಹೊಸಪೇಟೆ–583201
pragatinagaraj@gmail.com
19ನೇ ವಾರ್ಷಿಕ ಸಾಮಾನ್ಯ ಸಭೆಯ ನೋಟೀಸ್
ಪ್ರಗತಿ ಪತ್ತಿನ ಸೌಹಾರ್ದ ಸಹಕಾರಿ ಸಂಘ ನಿಯಮಿತ ಹೊಸಪೇಟೆ. ಇದರ 19ನೇ ವಾರ್ಷಿಕ ಸಾಮಾನ್ಯ ಸಭೆಯು **ದಿನಾಂಕ : 15–09–2024 ರವಿವಾರ ಬೆಳಿಗ್ಗೆ 11–00 ಗಂಟೆಗೆ** ಸರಿಯಾಗಿ ಸದ್ರಿ ಸಹಕಾರಿ ಸಂಘದ ಕಾರ್ಯಾಲಯದ ಆವರಣದಲ್ಲಿ ಸಭೆ ಕರೆಯುವುದಾಗಿ ನಿರ್ಧರಿಸಿದ್ದು, ಎಲ್ಲಾ ಅರ್ಹ ಸದಸ್ಯರು ಈ ಸಭೆಗೆ ಸಮಯಕ್ಕೆ ಸರಿಯಾಗಿ ಹಾಜರಾಗಬೇಕೆಂದು ಕೋರಲಾಗಿದೆ.
ದಿನಾಂಕ: 27–08–2024
ಆಡಳಿತ ಮಂಡಳಿ ಪರವಾಗಿ
ಸಹಿ/– ಕೆ. ನಾಗರಾಜ
ಮುಖ್ಯ ಕಾರ್ಯನಿರ್ವಾಹಕರು
ಸೂಚನೆ:–1) ಎಲ್ಲಾ ಅರ್ಹ ಸದಸ್ಯರಿಗೆ ಸಭೆಯ ತಿಳುವಳಿಕೆ ಪತ್ರ ಕಳುಹಿಸುವ ಪ್ರಕ್ರಿಯೇ ಚಾಲ್ತಿಯಲ್ಲಿದ್ದು , ತಲುಪದೇ ಇದ್ದಲ್ಲಿ ಈ ನೋಟೀಸನ್ನು ಮಹಾಸಭೆಯ ತಿಳುವಳಿಕೆ ಪತ್ರವೆಂದು ಪರಿಗಣಿಸಿ, ಸಭೆಗೆ ಹಾಜರಾಗಬೇಕೇಂದು ಕೋರಿದೆ.

## SSLC ಈ ಬಾರಿ ಫಲಿತಾಂಶ ನಮ್ಮದೆ ಹೈ ಸ್ಕೋರ್‌ಗೆ ಈಗಿಂದಲೇ ಅಭ್ಯಾಸ ಮಾಡಿ

Hampi Times Margadarshi
ಮನಸ್ಸು ಮಾಡು – ಕರ್ತವ್ಯ ನಿಷ್ಠನಾಗು – ಕಾದು ನೋಡು
ಹಂಪಿ ಟೈಮ್ಸ್ ಇ–ಪೇಪರ್‌ಗಾಗಿ ಭೇಟಿ ನೀಡಿ: https://epaper.hampitimes.com

ಹಂಪಿ ಟೈಮ್ಸ್ ಮಾರ್ಗದರ್ಶಿ SSLC: ಗಣಿತ

### ಸಮಾಂತರ ಶ್ರೇಢಿಗಳು

(ಮುಂದುವರೆದ ಭಾಗ) **ಅನ್ವಯಿಕ ಪ್ರಶ್ನೆಗಳಿವೆ ಬಿಡಿಸಿ**

1. ಒಂದು ಸಮಾಂತರ ಶ್ರೇಢಿಯ ಮೂರು ಪದಗಳ ಮೊತ್ತ 33 ಆಗಿದೆ. ಮೊದಲನೇ ಮತ್ತು ಮೂರನೇ ಪದಗಳ ಗುಣಲಬ್ಧವು ಅದರ ಎರಡನೇ ಪದಕ್ಕಿಂತ 29 ಹೆಚ್ಚಾಗಿದೆ ಹಾಗಾದರೆ ಆ ಸಮಾಂತರ ಶ್ರೇಢಿಯನ್ನು ಕಂಡುಹಿಡಿಯಿರಿ.

2) ಒಂದು ಸಮಾಂತರ ಶ್ರೇಢಿಯ ಮೂರು ಪದಗಳ ಮೊತ್ತ 21 ಮತ್ತು ಮೊದಲ ಹಾಗೂ ಮೂರನೇ ಪದಗಳ ಗುಣಲಬ್ಧವು ಎರಡನೇ ಪದಕ್ಕೆ ಆರು ಹೆಚ್ಚಾಗಿದೆ ಆ ಪದಗಳನ್ನು ಕಂಡುಹಿಡಿಯಿರಿ

3) ಒಂದು ಸಮಾಂತರ ಶ್ರೇಢಿಯ ಮೂರು ಅನುಕ್ರಮ ಪದಗಳ ಮೊತ್ತ ಆರು ಮತ್ತು ಅವುಗಳ ಗುಣಲಬ್ಧ 120 ಆದರೆ ಆ ಶ್ರೇಢಿಯ ಮೂರು ಪದಗಳನ್ನು ಕಂಡುಹಿಡಿಯಿರಿ

4) ಒಂದು ಸಮಾಂತರ ಶ್ರೇಢಿಯ ಮೂರು ಪದಗಳ ಮೊತ್ತ 27 ಮತ್ತು ಅವುಗಳ ಗುಣಲಬ್ದವು 54 ಆದರೆ ಆ ಪದಗಳನ್ನು ಕಂಡುಹಿಡಿಯಿರಿ

5) ಒಂದು ಸಮಾಂತರ ಶ್ರೇಢಿಯ ಮೂರು ಅನುಕ್ರಮ ಪದಗಳ ಮೊತ್ತ 15 ಹಾಗೂ ಆ ಸಂಖ್ಯೆಗಳ ಗುಣಲಬ್ದ 105 ಆದರೆ ಆ ಪದಗಳನ್ನು ಕಂಡುಹಿಡಿಯಿರಿ.

6) ಒಂದು ಸಮಾಂತರ ಶ್ರೇಢಿಯ ಮೂರು ಕ್ರಮಾನುಗತ ಪದಗಳ ಮೊತ್ತ 18 ಆಗಿದೆ ಮತ್ತು ಅವುಗಳ ವರ್ಗಗಳ ಮೊತ್ತವು 140 ಆದರೆ ಆ ಶ್ರೇಢಿಯ ಪದಗಳನ್ನು ಕಂಡುಹಿಡಿಯಿರಿ.

7) ಒಂದು ಸಮಾಂತರ ಶ್ರೇಢಿ ಯಲ್ಲಿರುವ ಮೊದಲ ಮೂರು ಪದಗಳ ಮೊತ್ತ 24 ಮತ್ತು ಆ ಪದಗಳ ವರ್ಗಗಳ ಮೊತ್ತವು 224 ಆದರೆ ಶ್ರೇಢಿಯಲ್ಲಿರುವ ಮೂರು ಪದಗಳನ್ನು ಕಂಡುಹಿಡಿಯಿರಿ.

8) ಒಂದು ತ್ರಿಭುಜದ ಮೂರು ಕೋನಗಳು ಸಮಾಂತರ ಶ್ರೇಢಿಯಲ್ಲಿವೆ ದೊಡ್ಡಕೋನ 75 ಡಿಗ್ರಿ ಆದರೆ ಉಳಿದ ಕೋನಗಳನ್ನು ಕಂಡುಹಿಡಿಯಿರಿ

9) ಒಂದು ಸಮಾಂತರ ಶ್ರೇಢಿಯಲ್ಲಿ ನಾಲ್ಕು ಪದಗಳ ಮೊತ್ತ 20 ಮತ್ತು ಅವುಗಳ ವರ್ಗಗಳ ಮೊತ್ತ 120 ಆದರೆ ಆ ನಾಲ್ಕು ಪದಗಳನ್ನು ಕಂಡುಹಿಡಿಯಿರಿ

10) ಒಂದು ಸಮಾಂತರ ಶ್ರೇಢಿಯ ನಾಲ್ಕು ಪದಗಳ ಮೊತ್ತ 68 ಹಾಗೂ ಮಧ್ಯದ ಎರಡು ಪದಗಳ ಗುಣಲಬ್ದ 280 ಆದರೆ ಆ ಪದಗಳನ್ನು ಕಂಡುಹಿಡಿಯಿರಿ.

–: ಪ್ರಯತ್ನ :–
ನೀವು ಹಲವು ಬಾರಿ ಸೋಲಬಹುದು ಆದರೆ ನಿರಂತರ ಪ್ರಯತ್ನ ನಿಮ್ಮನ್ನು ಎಂದೂ ಸೋಲಲು ಬಿಡುವುದಿಲ್ಲ.

ಮಾರ್ಗದರ್ಶಿ ಶಿಕ್ಷಕರು : **ಎಂ.ಎಸ್.ಮಂಜುನಾಥ,** ಶಿಕ್ಷಕರು, ಹಗರಿಬೊಮ್ಮನಹಳ್ಳಿ (ತಾ) ವಿಜಯನಗರ (ಜಿಲ್ಲೆ)

ಸಾಯಿಮಣಿ ಪ್ರಕಾಶನ, ಹೊಸಪೇಟೆ

Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA, PRGI No:KARKAN/2023/88055